(80)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ಶ್ರೀ ಅಪ್ಪಾಜಿಗೌಡ, ಶ್ರೀ ರಮೇಶಗೌಡ ಹಾಗೂ ಶ್ರೀ ಎಸ್.ಎಲ್. ಭೋಜೇಗೌಡ ಇವರುಗಳು ನಿಯಮ 72 ರಡಿಯಲ್ಲಿ ನೀಡಿರುವ ಸೂಚನಾ ಪತ್ರಿಕೆ ಉತ್ತರ**

**ಪ್ರಸ್ತಾಪಿಸಿರುವ ವಿಷಯ:**

ಎನ್.ಪಿ.ಎಸ್. ಯೋಜನೆಯ ಸಾಧಕ ಬಾಧಕಗಳ ಬಗ್ಗೆ ಪರಿಶೀಲಿಸಿ ವರದಿ ನೀಡಲು ರಾಜ್ಯ ಸರ್ಕಾರವು ನೇಮಕ ಮಾಡಿರುವ ಸಮಿತಿಯು ಕೈಗೊಂಡಿರುವ ಕಾರ್ಯ ಪ್ರಗತಿಗಳ ಬಗ್ಗೆ ಮತ್ತು ನೂತನ ಪಿಂಚಣಿ ಯೋಜನೆ (ಎನ್.ಪಿ.ಎಸ್.) ಜಾರಿಗೆ ಬರುವ ಪೂರ್ವದಲ್ಲಿ ನೇಮಕಾತಿ ಅಧಿಸೂಚನೆಗಳನ್ನು ಹೊರಡಿಸಿ ಎನ್.ಪಿ.ಎಸ್. ಯೋಜನೆ ಜಾರಿಗೊಳಿಸುವ ಮೊದಲೇ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ ಎನ್.ಪಿ.ಎಸ್. ಯೋಜನೆ ಜಾರಿಗೊಳಿಸಿದ ನಂತರ ನೇಮಕಾತಿ ಆದೇಶಗಳನ್ನು ನೀಡಿರುವಂತಹ ಪ್ರಕರಣಗಳಿಗೆ ಹಳೆ ಪಿಂಚಣಿ ಯೋಜನೆ (ಒ.ಪಿ.ಎಸ್) ಅನ್ವಯವಾಗುತ್ತದೆಂದು ಮಾನ್ಯ ಉಚ್ಚ ನ್ಯಾಯಾಲಯವು ನೀಡಿರುವ ತೀರ್ಪುಗಳನ್ನು ಅನುಷ್ಠಾನಗೊಳಿಸಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆದಿರುತ್ತಾರೆ.

**ಉತ್ತರ:**

ನೂತನ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ/ ಮಾರ್ಪಾಡು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018, ದಿನಾಂಕ: 11.12.2018 ರಂದು ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ಮೂರು ಸಭೆಗಳನ್ನು ನಡೆಸಿದೆ. ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ.

ನೂತನ ಪಿಂಚಣಿ ಯೋಜನೆ (ಎನ್.ಪಿ.ಎಸ್.) ಜಾರಿಗೆ ಬರುವ ಪೂರ್ವದಲ್ಲಿ ನೇಮಕಾತಿ ಅಧಿಸೂಚನೆಗಳನ್ನು ಹೊರಡಿಸಿ ಎನ್.ಪಿ.ಎಸ್. ಯೋಜನೆ ಜಾರಿಗೊಳಿಸುವ ಮೊದಲೇ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ ಎನ್.ಪಿ.ಎಸ್. ಯೋಜನೆ ಜಾರಿಗೊಳಿಸಿದ ನಂತರ ನೇಮಕಾತಿ ಆದೇಶಗಳನ್ನು ನೀಡಿರುವಂತಹ ಪ್ರಕರಣಗಳಿಗೆ ಹಳೆ ಪಿಂಚಣಿ ಯೋಜನೆ (ಒ.ಪಿ.ಎಸ್) ಅನ್ವಯವಾಗುತ್ತದೆಂದು ಮಾನ್ಯ ಉಚ್ಚ ನ್ಯಾಯಾಲಯವು ಯಾವುದೇ ತೀರ್ಪನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಸರ್ಕಾರದ ಆದೇಶ ಸಂಖ್ಯೆ: ಆಇ 39 ಪಿಇಎನ್ 2020 (ಭಾ), ದಿನಾಂಕ: 17.02.2021 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಹುದ್ದೆಗಳಿಗೆ ಸಂಬಂಧಿಸಿದಂತೆ, ದಿನಾಂಕ:01.04.2006ರ ಪೂರ್ವದ ಆಯ್ಕೆ ಮತ್ತು ನೇಮಕಾತಿ ಪ್ರಕ್ರಿಯೆಗಳ

ಸಂಬಂಧದಲ್ಲಿ ದಿನಾಂಕ:01.04.2006 ಮತ್ತು ತದನಂತರದಲ್ಲಿ ಆಯ್ಕೆ ಮತ್ತು ನೇಮಕ ಹೊಂದಿ ಸೇವೆಗೆ ಸೇರಿರುವ ಅಭ್ಯರ್ಥಿಗಳ ಪ್ರಕರಣಗಳಿವೆ. ಆದರೆ ಅದೇ ತಂಡದಲ್ಲಿನ ಇತರೆ ಅಭ್ಯರ್ಥಿಗಳು ದಿನಾಂಕ:01.04.2006ರ ಪೂರ್ವದಲ್ಲಿಯೇ ಆಯ್ಕೆ ಮತ್ತು ನೇಮಕಾತಿಗಳು ಪೂರ್ಣಗೊಂಡು ಸೇವೆಗೆ ನೇಮಕ ಹೊಂದಿ ವರದಿ ಮಾಡಿಕೊಂಡಿರುವ ಮತ್ತು ಇದರಿಂದಾಗಿ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಟ್ಟಿರುವ ಸಂದರ್ಭಗಳಿವೆ. ಅಂತಹ ನಿರ್ದಿಷ್ಟ ವಿಶಿಷ್ಟ ಪ್ರಕರಣಗಳನ್ನು ಮಾತ್ರ ಸರ್ಕಾರದ ಆದೇಶ ಸಂಖ್ಯೆ:ಆಇ (ವಿಶೇಷ) 04 ಪಿಇಟಿ 2005, ದಿನಾಂಕ:31.03.2006ರ ಆದೇಶದನ್ವಯ ದಿನಾಂಕ:01.04.2006 ರಿಂದ ಜಾರಿಗೊಳಿಸಲಾದ ನೂತನ ವ್ಯಾಖ್ಯಾನಿತ ಅಂಶದಾಯಿ ಕೊಡುಗೆ ಯೋಜನಾ ವ್ಯಾಪ್ತಿಯಿಂದ ಸಡಿಲಿಕೆಯನ್ನು ನೀಡಿ ಹಿಂದಿನ ಡಿಫೈನ್ಡ್ ಪಿಂಚಣಿ ವ್ಯಾಪ್ತಿಗೆ ಈ ಕೆಳಕಂಡ ಷರತ್ತಿಗೊಳಪಡಿಸಿ ಸರ್ಕಾರವು ಆದೇಶಿಸಿದೆ:-

1. ದಿನಾಂಕ:01.04.2006ರ ಹಿಂದಿನ ನೇಮಕಾತಿ ಪ್ರಕ್ರಿಯೆಗಳಿಗೆ ಸಂಬಂಧಿಸಿದಂತೆ ಆಯ್ಕೆಗೊಂಡಿರುವ ಅಭ್ಯರ್ಥಿಗಳು ಪ್ರಪ್ರಥಮವಾಗಿ ರಾಜ್ಯ ಸಿವಿಲ್ ಸೇವೆಗೆ ನೇಮಕವನ್ನು ಹೊಂದಿರತಕ್ಕದ್ದು.
2. ತದನಂತರದ ತಂಡದಲ್ಲಿ ಆಯ್ಕೆಯನ್ನು ಹೊಂದಿ ಸೇವಾ ಜೇಷ್ಠತೆಯಲ್ಲಿ ಕಿರಿಯರಾಗಿರುವವರು ಪ್ರಪ್ರಥಮವಾಗಿ ರಾಜ್ಯ ಸಿವಿಲ್ ಸೇವೆಗೆ ದಿನಾಂಕ:01.04.2006ರ ಪೂರ್ವದಲ್ಲಿ ನೇಮಕಗೊಂಡು, ತತ್ಪರಿಣಾಮವಾಗಿ ಡಿಫೈನ್ಡ್ ಪಿಂಚಣಿ ಸೌಲಭ್ಯವನ್ನು ಹೊಂದಿರತಕ್ಕದ್ದು. (ಒಂದೇ ನೇಮಕಾತಿ ಅಥವಾ ತದನಂತರದಲ್ಲಿನ ನೇಮಕಾತಿ ಪ್ರಕರಣಗಳಲ್ಲಿ, ಆತನಿಗಿಂತ ಸೇವಾ ಜೇಷ್ಠತೆಯಲ್ಲಿ ಕಿರಿಯರಾಗಿರುವವರ ಪ್ರಕರಣಗಳಲ್ಲಿ ಅವರುಗಳ ನೇಮಕಾತಿಗಳು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೆ ಒಳಪಟ್ಟಿದ್ದು ಆದರೆ ಅದೇ ನೇಮಕಾತಿಗಳಿಗೆ ಒಳಪಟ್ಟಿರುವ ಯಾವುದೇ ಒಬ್ಬ ವ್ಯಕ್ತಿಯು ತದನಂತರ ದಿನಾಂಕ:01.04.2006ರ ನಂತರದಲ್ಲಿ ಸೇವೆಗೆ ಸೇರಿರುವ ಸಂದರ್ಭದಿಂದಾಗಿ ನೂತನ ಪಿಂಚಣಿ ವ್ಯಾಪ್ತಿಗೆ ಒಳಪಡುವ ಪ್ರಕರಣಗಳು).

**<u>ಸಂಖ್ಯೆ: ಆಇ 158 ಪಿಇಎನ್ 2021</u>**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ